6 ತಿಂಗಳಿಗೆ ಮೀರದಂತೆ ಕೊಡಬಹುದೆಂದು ಆದೇಶಿಸಿದೆ. ಹೆಚ್ಚುವರಿ ಕಾಲಾವಕಾಶವನ್ನು ನೀಡುವ ಬಗ್ಗೆ ನಿರ್ಧಾರ ಮಾಡಲು, ಮಂಡಳಿಯು ಮಾಹಿತಿಯನ್ನು ಸಂಗ್ರಹಿಸುತ್ತಿದೆ

ಮಂಡ್ಯ ಜಿಲ್ಲೆಯಲ್ಲಿನ ಹಸಿರು ಕಾರ್ಡುದಾರರ ಸಂಖ್ಯೆ

263-ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಹಸಿರು ಕಾರ್ಡು ಹೊಂದಿರುವವರ ಸಂಖ್ಯೆ ಎಷ್ಟು?

ಆ) ಅವರಿಗೆ ಯಾವ ಪ್ರಮಾಣದಲ್ಲಿ ಪಡಿತರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ

ಇ) ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಪಂಚಿಕೆಯಾಗುತ್ತಾ ಇರುವ ಸೀಮೆಎಣ್ಣೆ ಪ್ರಮಾಣವೆಷ್ಟು?

ಶ್ರೀಮತಿ ಮನೋರಮ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):

ಅ) 1.55 ಲಕ್ಷ (ತ್ರಿವರ್ಣ)

ಆ) ಹಸಿರು ಪಡಿತರ ಚೀಟಿದಾರರಿಗೆ (ತ್ರಿವರ್ಣ ಪಡಿತರ ಚೀಟಿ) ಪ್ರತಿ ಕಾರ್ಡಿಗೆ 6 ಕೆ.ಜಿ. ಅಕ್ಕಿ ಮತ್ತು 4 ಕೆ.ಜಿ. ಗೋಧಿಯಂತೆ ಒಟ್ಟು 10 ಕೆ.ಜಿ. ಕಡ್ಡಾಯವಾಗಿ ಆಹಾರಧಾನ್ಯಗಳನ್ನು ಸಬ್ಸಿಡಿ ದರದಲ್ಲಿ ಒದಗಿಸಲಾಗುತ್ತಿದೆ. ಸಕ್ಕರೆ 2 ಕೆ.ಜಿ.ಯಂತೆ ಪ್ರತಿ ಕಾರ್ಡಿಗೆ ತಿಂಗಳಿಗೆ ನೀಡಲಾಗುತ್ತಿದೆ.

ಇ) ಮಂಡ್ಯ ಜಿಲ್ಲೆಗೆ ಪ್ರತಿ ತಿಂಗಳಿಗೆ 1236 ಕೆ.ಎಲ್. ಪಟ್ಟಣ ಪ್ರದೇಶದಲ್ಲಿ ಪ್ರತಿ ಕಾರ್ಡುದಾರರಿಗೆ 6 ಲೀಟರ್ ಸೀಮೆಎಣ್ಣೆ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ 3 ಲೀಟರ್ನಂತೆ ನೀಡಲಾಗುತ್ತಿದೆ.

ಬೆಂಗಳೂರು ನಗರದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸುವ ಬಗ್ಗೆ

297-ಶ್ರೀ ಆರ್. ವಿ. ದೇವರಾಜ್ (ಚಾಮರಾಜಪೇಟೆ) : ಮಾನ್ಯ ಪ್ರವಾಸೋದ್ಯಮ ಹಾಗೂ ಸಾರ್ವಜನಿಕ ಕುಂದುಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದವರು ಯಾವ ಯಾವ ಸ್ಥಳಗಳನ್ನು ಬೆಂಗಳೂರು ನಗರದ ಪ್ರವಾಸಿ ಕಾರ್ಯಕ್ರಮದಲ್ಲಿ ತೋರಿಸುತ್ತಿರುವರು?

ಆ) ಬೆಂಗಳೂರಿನಲ್ಲಿರುವ ದೊಡ್ಡ ಗಣಪತಿ ದೇವಸ್ಥಾನ, ಬನ್ನೇರುಘಟ್ಟ ನ್ಯಾಷನಲ್ ಪಾರ್ಕ್ ಹಾಗೂ ನಂದಿಬೆಟ್ಟಗಳನ್ನೂ ಆ ಪ್ರವಾಸಿ ಕಾರ್ಯಕ್ರಮದಲ್ಲಿ ಸೇರಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದುಕೊರತೆಗಳ ರಾಜ್ಯ ಸಚಿವರು):

ಅ) ಬೆಂಗಳೂರು ನಗರದ ಪ್ರವಾಸದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ಈ ಕೆಳಕಂಡ ಸ್ಥಳಗಳನ್ನು ಅಳವಡಿಸಿಕೊಂಡಿದೆ

ವಿಧಾನ ಸೌಧ, ಲಾಲ್ಬಾಗ್, ಬಸವನಗುಡಿ (ದೊಡ್ಡ ಗಣಪತಿ ದೇವಸ್ಥಾನ ಸೇರಿದಂತೆ) ಟಿಪ್ಪು ಅರಮನೆ, ಸರ್ಕಾರಿ ವಸ್ತು ಸಂಗ್ರಹಾಲಯ ಕಾವೇರಿ ಕರಕುಶಲ ಮಳಿಗೆ ಮತ್ತು ಅಲಸೂರು ಕೆರೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.